RNU AIR DHARWAD

DECEMMBER 17, 2025

AKASHAVANI - DHARWAD

PRADESH SAAMACHARA (KANNADA) 12 PM

<><><>

ಪೊಲೀಸ್ ಸಬ್ ಇನ್ಸ್‌ಪೆಕ್ಟರ್‌ಗಳ ಸಾವಿರದ 600 ಹುದ್ದೆಗಳ ನೇಮಕಾತಿಗೆ ಅನುಮತಿ ಕೋರಿ, ಆರ್ಥಿಕ ಇಲಾಖೆಗೆ, ಪ್ರಸ್ತಾವ ಸಲ್ಲಿಸಲಾಗಿದೆ ಎಂದು, ಗೃಹ ಖಾತೆ ಸಚಿವ ಜಿ.ಪರಮೇಶ್ವರ ತಿಳಿಸಿದ್ದಾರೆ. ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ನಡೆಯುತ್ತಿರುವ ಚಳಿಗಾಲದ ವಿಧಾನಮಂಡಲದ ಅಧಿವೇಶನದಲ್ಲಿ, ವಿಧಾನಸಭೆಯ ಪ್ರಶ್ನೋತ್ತರ ಕಲಾಪದಲ್ಲಿ ಶಿವಮೊಗ್ಗ ಶಾಸಕ ಚನ್ನಬಸಪ್ಪ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಅವರು, ಈ ಹಿಂದಿದ್ದ ಸರ್ಕಾರದ ಅವಧಿಯಲ್ಲಿ, 545 ಪಿ.ಎಸ್.ಐ ಹುದ್ದೆಗಳ ನೇಮಕಾತಿ ವಿಚಾರದಲ್ಲಿ, ಗೊಂದಲ ಉಂಟಾಗಿ, ನೇಮಕಾತಿ ಪ್ರಕ್ರಿಯೆ ಸ್ಥಗಿತಗೊಂಡಿತ್ತು. ಸದ್ಯ ತಮ್ಮ ಸರ್ಕಾರ, 947 ಪಿ.ಎಸ್.ಐ ಹುದ್ದೆಗಳನ್ನು ಭರ್ತಿ ಮಾಡಿದೆ. ಆಯ್ಕೆಗೊಂಡ ಪ್ರಶಿಕ್ಷಣಾರ್ಥಿ ಪಿ.ಎಸ್.ಐ.ಗಳು ತರಬೇತಿ ಪಡೆಯುತ್ತಿದ್ದಾರೆ. ತರಬೇತಿ ಪೂರ್ಣಗೊಂಡ ಬಳಿಕ, ಶಿವಮೊಗ್ಗ ಜಿಲ್ಲೆಯಲ್ಲಿ ಖಾಲಿ ಇರುವ, 42 ಪಿ.ಎಸ್.ಐ ಹುದ್ದೆಗಳ ಪೈಕಿ, 32 ಹುದ್ದೆಗಳಿಗೆ, ನೇಮಕ ಮಾಡಲಾಗುವುದು ಎಂದು ಸಚಿವ ಜಿ.ಪರಮೇಶ್ವರ ಹೇಳಿದರು.

<><><>

ರಾಜ್ಯದಲ್ಲಿ ವಿದ್ಯುತ್ ಕಳ್ಳತನ ಹಾಗೂ ದುರ್ಬಳಕೆ ಪ್ರಕರಣಗಳನ್ನು ಪತ್ತೆ ಹಚ್ಚಿ, ನಿಯಮಾನುಸಾರ ಸೂಕ್ತ ಕ್ರಮ ಕೈಗೊಳ್ಳಲು, ಜಾಗೃತ ದಳದ ಘಟಕ ರಚಿಸಲಾಗಿದೆ ಎಂದು ಇಂಧನ ಖಾತೆ ಸಚಿವ ಕೆ.ಜೆ. ಜಾರ್ಜ್ ತಿಳಿಸಿದ್ದಾರೆ. ವಿಧಾನ ಪರಿ ‘ತ್‌ನಲ್ಲಿ ಸದಸ್ಯರ ಪ್ರಶ್ನೆಯೊಂದಕ್ಕೆ ಉತ್ತರಿಸಿದ ಸಚಿವರು, ಪೊಲೀಸ್ ಅಧೀಕ್ಷಕರು, ಉಪ ಅಧೀಕ್ಷಕರು ಹಾಗೂ ಇಂಧನ ಇಲಾಖೆ ಕಾರ್ಯನಿರ್ವಾಹಕ ಅಭಿಯಂತರರ ನೇತೃತ್ವದಲ್ಲಿ ಜಾಗ್ರತ ದಳದ ಘಟಕ ರಚಿಸಲಾಗಿದೆ. ಜಿಲ್ಲಾ ಮಟ್ಟದಲ್ಲಿ ಜಾಗೃತ ದಳ ಘಟಕದಲ್ಲಿ, ಪೊಲೀಸ್ ಇನ್ಸ್‌ಪೆಕ್ಟರ್, ಸಬ್–ಇನ್ಸ್‌ಪೆಕ್ಟರ್‌ರೊಂದಿಗೆ, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರನ್ನು ನಿಯೋಜಿಸಲಾಗಿದೆ ಎಂದರು. ಜಾಗೃತ ದಳ, ಕಾಲ–ಕಾಲಕ್ಕೆ ತಪಾಸಣೆ, ಅನಿರೀಕ್ಷಿತ ದಾಳಿ ಕೈಗೊಂಡು, ವಿದ್ಯುತ್ ಕಳ್ಳತನ ಹಾಗೂ ದುರ್ಬಳಕೆ ಪ್ರಕರಣಗಳನ್ನು ತಡೆಗಟ್ಟಲು, ಕ್ರಮ ಕೈಗೊಳ್ಳುತ್ತಿದೆ ಎಂದು ಸಚಿವ ಜಾರ್ಜ್ ಹೇಳಿದರು.

<><><>

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ಈಗಾಗಲೇ ಕೆರೆಗಳ ಸರ್ವೇ, ಒತ್ತುವರಿ ತೆರವು ಮತ್ತು ಪುನಃಶ್ಚೇತನಕ್ಕೆ ಕ್ರಮ ವಹಿಸಿದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಬೆಳಗಾವಿಯ ಸುವರ್ಣಸೌಧದಲ್ಲಿ ಆಯೋಜಿಸಲಾದ ಸಣ್ಣ ನೀರಾವರಿ ಇಲಾಖೆಯ ಕೆರೆಗಳಿಗೆ ರಚಿಸಿರುವ ಕೆರೆ ಬಳಕೆದಾರ ಸಂಘಗಳ ಪದಾಧಿಕಾರಿಗಳಿಗೆ ಕೆರೆಗಳ ನಿರ್ವಹಣೆ ಕುರಿತು ಕಾರ್ಯಗಾರ ಮತ್ತು ಕೈಪಿಡಿ ಬಿಡುಗಡೆ ಹಾಗೂ ‘ನೀರಿದ್ದರೆ ನಾಳೆ’ ಕರಪತ್ರ ಅನಾವರಣ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ರಾಜ್ಯದಲ್ಲಿ ಸುಮಾರು 44 ಸಾವಿರ ಕೆರೆಗಳಿದ್ದು, ಅವುಗಳಲ್ಲಿ ಸುಮಾರು 20 ಸಾವಿರಕ್ಕೂ ಹೆಚ್ಚು ಕೆರೆಗಳು ಪಂಚಾಯತ್ ರಾಜ್ ಇಲಾಖೆಯ ವ್ಯಾಪ್ತಿಯಡಿಯಲ್ಲಿ ಬರುತ್ತವೆ ಎಂದರು.

<><><>

ಸ್ವಚ್ಛ ಭಾರತ ಅಭಿಯಾನ ಹಿನ್ನಲೆ, ಬೆಳಗಾವಿಯಲ್ಲಿ ಇಂದು ಬೆಳಗ್ಗೆ ಆಯೋಜಿಸಿದ್ದ ಸ್ವಚ್ಛತಾ ಓಟಕ್ಕೆ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಹಸಿರು ನಿಶಾನೆ ತೋರುವುದರ ಮೂಲಕ ಚಾಲನೆ ನೀಡಿದರು. ಬೆಳಗಾವಿಯ ಅಶೋಕ ವೃತ್ತದಿಂದ ಕೋಟೆ ಕೆರೆವರೆಗೂ 5 ಕಿಲೋ ಮೀಟರ್ ಓಟದ ಸ್ಪರ್ಧೆ ನಡೆಸಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ, ಬೆಳಗಾವಿ ನಗರ ಗಿಡಮರ, ಕೆರೆ, ಕೋಟೆಗಳಿಂದ ಕೂಡಿದ ಸುಂದರ ನಗರವಾಗಿದೆ. ನಗರದ ರಸ್ತೆ, ಇನ್ನಿತರ ಸ್ಥಳಗಳ ಸ್ವಚ್ಛತೆಯೊಂದಿಗೆ ಸೌಂದರ್ಯ ಕಾಯ್ದುಕೊಳ್ಳುವುದು ಎಲ್ಲರ ಜವಾಬ್ದಾರಿಯಾಗಿದೆ. ಬೆಳಗಾವಿ ನಗರದ ಅಭಿವೃದ್ಧಿಗೆ ಈಗಾಗಲೇ ಅನೇಕ ಯೋಜನೆಗಳ ಮೂಲಕ ಕಾಮಗಾರಿಗಳು ನಡೆಯುತ್ತಿವೆ. ಇದಕ್ಕಾಗಿ 200 ಕೋಟಿ ಹಣಕಾಸಿನ ನೆರವು ನೀಡಲಾಗಿದೆ ಎಂದು ತಿಳಿಸಿದರು.

<><><>

ಬಾಲ ವಿಕಾಸ ಅಕಾಡೆಮಿಯ ರಾಜ್ಯಮಟ್ಟದ ಬಾಲ ಗೌರವ ಪ್ರಶಸ್ತಿಗೆ ಧಾರವಾಡದ ಶ್ರೀ ಮಂಜುನಾಥೇಶ್ವರ ಆಂಗ್ಲ ಮಾಧ್ಯಮ ಶಾಲೆಯ 9 ನೇ ತರಗತಿ ವಿದ್ಯಾರ್ಥಿ ದಿಗಂತ  ತುಂಬರಗುದ್ದಿ ಭಾಜನರಾಗಿದ್ದು, ಅವರಿಗೆ ಬೆಳಗಾವಿಯ ಸುವರ್ಣಸೌಧದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಯಿತು. ನಂತರ ಪ್ರದೇಶ ಸಮಾಚಾರಕ್ಕಾಗಿ ತಮ್ಮ ಸಂತಸ ಹಂಚಿಕೊಂಡ ಅವರು, ತಾವು ಇದುವರೆಗೆ ರಾಜ್ಯ ಮತ್ತು ರಾಷ್ಟ್ರಮಟ್ಟದಲ್ಲಿ 50 ಕ್ಕೂ ಹೆಚ್ಚು ನಾಟಕಗಳಲ್ಲಿ ಹಾಗೂ 5 ಚಲನಚಿತ್ರಗಳಲ್ಲಿ ಅಭಿನಯಿಸಿರುವುದಾಗಿ ತಿಳಿಸಿದರು.

<><><>

ಧ್ವನಿ– ದಿಗಂತ (33 ಸೆಕೆಂದುಗಳು)

<><><>

ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ನೇತೃತ್ವದಲ್ಲಿ ಜಿ.ಟಿ ಚಂದ್ರಶೇಖರಪ್ಪ ಅವರ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಿ ತುಂಗಭದ್ರಾ ಜಲಾಶಯಕ್ಕೆ 430 ಕೋಟಿ ರೂಪಾಯಿಗಳ ವೆಚ್ಚದಲ್ಲಿ 33 ಹೊಸ ಗೇಟ್‌ಗಳ  ಅಳವಡಿಕೆಗೆ ಸರ್ಕಾರ ಮುಂದಾಗಿದೆ ಎಂದು ಸಿಂಧನೂರು ಶಾಸಕ ಹಂಪನಗೌಡ ಬಾದರ್ಲಿ ತಿಳಿಸಿದ್ದಾರೆ. ವಿಜಯನಗರ ಜಿಲ್ಲೆ ಹೊಸಪೇಟೆಯಲ್ಲಿರುವ ತುಂಗಭದ್ರಾ ಜಲಾಶಯಕ್ಕೆ ಭೇಟಿ ನೀಡಿ, ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೊಪ್ಪಳ, ಗಂಗಾವತಿ, ಸಿಂಧನೂರು, ಮಸ್ಕಿ, ಮಾನವಿ ಮತ್ತು ರಾಯಚೂರು ತಾಲೂಕುಗಳಿಗೆ ನೀರಾವರಿ ಸೌಲಭ್ಯ ಒದಗಿಸಿರುವ ಶಿಥಿಲಾವಸ್ಥೆಯಲ್ಲಿರುವ 241 ಕಿಲೋಮೀಟರ್ ಉದ್ದದ ತುಂಗಭದ್ರ ಎಡದಂಡೆ ಮುಖ್ಯ ನಾಲೆಯ ಆಧುನಿಕರಣದ ಕಾರ್ಯ ಪ್ರಗತಿಯಲ್ಲಿದೆ ಎಂದು ಮಾಹಿತಿ ನೀಡಿದರು.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ.

<><><>